

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಸ್ವಚ್ಛತೆಗೆ ಮಾದರಿಯಾದ ಹಗರನೂರು ಗ್ರಾಮ

ಗ್ರಾಮೀಣ ಪ್ರದೇಶಗಳಲ್ಲಿ ನೈರ್ಮಲ್ಯತೆಯನ್ನು ಕಾಯ್ದುಕೊಳ್ಳಲು ಬೇಕಾಗಿರುವ ವ್ಯವಸ್ಥೆಯನ್ನು ಕಲ್ಪಿಸುವೆಡೆ ಸ್ವಚ್ಛ ಭಾರತ್ ಮಿಷನ್ (ಗ್ರಾ) ಕೆಲಸ ನಿರ್ವಹಿಸುತ್ತಿದೆ. ಘನ ಮತ್ತು ದ್ರವ್ಯ ತ್ಯಾಜ್ಯದ ಸಮರ್ಪಕ ನಿರ್ವಹಣೆಯ ಗ್ರಾಮದ ಸ್ವಚ್ಛತೆಯನ್ನು ಕಾಯ್ದುಕೊಳ್ಳಲು ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಗ್ರಾಮದಲ್ಲಿ ನೈರ್ಮಲ್ಯ ಕಾಯ್ದುಕೊಂಡು ಜನರ ಜೀವನಮಟ್ಟ ಸುಧಾರಿಸುವ ಮೂಲಕ ಗ್ರಾಮದ ಸುಸ್ಥಿರ ಅಭಿವೃದ್ಧಿಗಾಗಿ ಶ್ರಮಿಸುವುದನ್ನು ಸ್ವಚ್ಛ ಭಾರತ್ ಮಿಷನ್ ಮಾಡುತ್ತಿದೆ. ಈ ಪಥದಲ್ಲಿ ಸಾಗುತ್ತಿರುವ ಗ್ರಾಮಗಳಲ್ಲಿ ಹಗರನೂರು ಗ್ರಾಮವೂ ಒಂದಾಗಿದೆ.

ಬಳ್ಳಾರಿ ಜಿಲ್ಲೆಯ ಹಡಗಲ್ಲಿ ತಾಲ್ಲೂಕಿನ ಹಗರನೂರು ಗ್ರಾಮವು ಬಳ್ಳಾರಿಯಿಂದ 135 ಕಿಮೀ ದೂರದಲ್ಲಿದೆ. ಈ ಗ್ರಾಮದಲ್ಲಿ ಒಟ್ಟು 351 ಕುಟುಂಬಗಳು ವಾಸವಾಗಿವೆ. ಗ್ರಾಮದ ಬಹುತೇಕ ಕುಟುಂಬಗಳು ಕೃಷಿಯನ್ನೆ ಅವಲಂಬಿಸಿಕೊಂಡಿದ್ದು, ಜೊತೆಗೆ ಹೈನುಗಾರಿಕೆ ಮತ್ತು ಕುರಿ, ಮೇಕೆ ಸಾಕಾಣಿಕೆಯನ್ನು ಮಾಡುತ್ತಿರುವುದರಿಂದ ಗ್ರಾಮದ ಬಹುತೇಕ ಓಣಿಗಳಲ್ಲೂ ಕೃಷಿ ತ್ಯಾಜ್ಯ ಕಂಡುಬರುತ್ತದೆ. ಕೃಷಿ ತ್ಯಾಜ್ಯದಿಂದ ಚರಂಡಿಗಳು ಕಟ್ಟಿಕೊಳ್ಳುತ್ತಿದ್ದರಿಂದ ಬಚ್ಚಲ ನೀರು, ಬಟ್ಟೆತೊಳೆದ ನೀರು, ಪಾತ್ರೆ ತೊಳೆದ ನೀರು ಚರಂಡಿಯಲ್ಲಿ ಸರಾಗವಾಗಿ ಹರಿಯಲು ಆಗದೆ ಚರಂಡಿ ಕಟ್ಟಿಕೊಂಡಿರುತ್ತಿತ್ತು. ಇದರಿಂದ ಚರಂಡಿ ನೀರು ರಸ್ತೆಯ ಮೇಲೆ ನೀರು ಹರಿಯುತ್ತಿತ್ತು. ಇದನ್ನು ನಿರ್ವಹಣೆ ಮಾಡುವುದು ಗ್ರಾಮ ಪಂಚಾಯಿತಿಗೆ ಸವಾಲಿನ ಕೆಲಸವಾಗಿತ್ತು.

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ SLWM ಘಟಕ ಮಂಜೂರಾದ ನಂತರ ಗ್ರಾಮದ ಹೊರಭಾಗದಲ್ಲಿ ಸುಸಜ್ಜಿತವಾದ ಸ್ವಚ್ಛ ಸಂಕೀರ್ಣವನ್ನು ನಿರ್ಮಿಸಿದ್ದು, ಹಸಿ ಮತ್ತು ಒಣ ಕಸವನ್ನು ನಿರ್ವಹಿಸಲಾಗುತ್ತಿದೆ. ಆದರೆ ದ್ರವ ತ್ಯಾಜ್ಯ ನಿರ್ವಹಣೆ ಗ್ರಾಮದಲ್ಲಿ ಸವಾಲಿನ ಕೆಲಸವಾಗಿತ್ತು. ಇದೇ ಸಂದರ್ಭದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರತಿ ತಾಲೂಕಿನಿಂದ ಎರಡು ಗ್ರಾಮ ಗಳನ್ನು ಕೊಳಚೆ ಮುಕ್ತ ಮಾಡಲು ಜಿ.ಪಂ ಸಿಇಓ ನಿರ್ದೇಶನ ನೀಡಿದರು.

ಹಗರನೂರು ಗ್ರಾಮವನ್ನು ಆಯ್ಕೆ ಮಾಡಿದ ಕಾರ್ಯ ನಿರ್ವಾಹಕ ಅಧಿಕಾರಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಸೇರಿ ಪಂಚಾಯಿತಿ ಸಿಬ್ಬಂದಿಗಳು, ಮಹಿಳಾ ಸ್ವ-ಸಹಾಯ ಸಂಘಗಳ ಎಂ.ಬಿ.ಕೆ, ಎಲ್.ಸಿ.ಆರ್.ಪಿಗಳು, ನರೇಗಾ ಮೇಟಿಗಳು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರನ್ನು ಒಳಗೊಂಡ ಮೂರು ಜನರ ಒಟ್ಟು 10 ಗ್ರಾಮ ಮಟ್ಟದ ಕಾರ್ಯಪಡೆ ತಂಡವನ್ನು ರಚಿಸಿದರು. ನಂತರ ಇಂಗುಗುಂಡಿ ನಿರ್ಮಾಣದ ಕುರಿತು ಜಾಗೃತಿ ಮೂಡಿಸಲು ಇವರಿಗೆ ತರಬೇತಿ ನೀಡಲಾಯಿತು. ಈ ಮೂಲಕ ಗ್ರಾಮದ ಪ್ರತಿ ಮನೆಯಲ್ಲಿ ಇಂಗುಗುಂಡಿ ನಿರ್ಮಿಸಿಕೊಳ್ಳುವಂತೆ ಜನರನ್ನು ಪ್ರೋತ್ಸಾಹಿಸಲಾಯಿತು. ವೈಯಕ್ತಿಕ ಇಂಗುಗುಂಡಿಗಳ ನಿರ್ಮಾಣದಿಂದಾಗಿ ಚರಂಡಿ ಕಟ್ಟಿಕೊಳ್ಳುವುದು ಮತ್ತು ರಸ್ತೆಯಲ್ಲಿ ನೀರು ಹರಿಯುವುದು ತಪ್ಪಿತು. ಇದರಿಂದ ಸೊಳ್ಳೆಗಳ ಉತ್ಪತ್ತಿ ಕಡಿಮೆಯಾಗಿ ಗ್ರಾಮದಲ್ಲಿ ಆರೋಗ್ಯಕರ ವಾತಾವರಣ ನಿರ್ಮಾಣವಾಯಿತು.

## ಇಂಗುಗುಂಡಿ ಕುರಿತು ಪ್ರತಿಕ್ರಿಯೆ :

***ಹಗರನೂರು ಗ್ರಾಮದ ಕೊಟ್ರಪ್ಪ ಅವರ ಅಭಿಪ್ರಾಯ -***

" ಇಂಗುಗುಂಡಿ ನಿರ್ಮಾಣದಿಂದಾಗಿ ಮನೆಯ ಪಕ್ಕ ನೀರು ನಿಂತು ದುರ್ವಾಸನೆ ಬೀರುವುದು ಕಡಿಮೆಯಾಗಿದೆ. ಗ್ರಾಮದಲ್ಲಿ ಸೊಳ್ಳೆಗಳು ಕಡಿಮೆಯಾಗಿರುವುದರಿಂದ ಸಂಜೆ ಹೊತ್ತಿನಲ್ಲಿ ನೆಮ್ಮದಿಯಿಂದ ಹೊರಗಡೆ ಕುಳಿತು ವಿಶ್ರಾಂತಿ ಪಡೆಯಲು ಅನುಕೂಲವಾಗಿದೆ"

